ಕರ್ನಾಟಕ ವಿಧಾನ ಸಭೆ

307 ಶ್ರೀ ಜಯಚಂದ್ರ ಟಿ.ಬಿ. (ಶಿರಾ).

ಇಂಧನ ಸಚಿವರು.

ಅ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದಸೂಡಿಯಲ್ಲಿ ವಿದ್ಯುತ್ ಉಪಸ್ಥಾವರ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಇದುವರೆಗೂ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದಸೂಡಿಯಲ್ಲಿ 66/11 ಕೆ.ವಿ. ಉಪ ವಿದ್ಯುತ್ ಕೇಂದ್ರದ ಕಾಮಗಾರಿಗಳು ಈಗಾಗಲೇ ಪ್ರಗತಿಯಲ್ಲಿದ್ದು, ಮುಗಿಯುವ ಹಂತದಲ್ಲಿದೆ. ಕಾಮಗಾರಿಯ ಅಂದಾಜು ವೆಚ್ಚ ರೂ.690.57 ಲಕ್ಷಗಳಾಗಿರುತ್ತದೆ.

ಆ) ವಿದ್ಯುತ್ ಉಪ ಸ್ಥಾವರ ಕಾಮಗಾರಿಯ ಪ್ರಗತಿಯು ಯಾವ ಹಂತದಲ್ಲಿದೆ?

ಜೂನ್ 2009 ರ ಅಂತ್ಯದೊಳಗೆ ಸದರಿ ವಿದ್ಯುತ್ ಉಪಕೇಂದ್ರವನ್ನು ಕಾರ್ಯೋನ್ಮುಖಗೊಳಿಸುವ ಗುರಿಯನ್ನು ಹೊಂದಲಾಗಿದೆ.

ಸಂಖ್ಯೆ: ಇಎನ್ 20 ಪಿಪಿಎಂ 2009

(ಕೆ.ಎಸ್.ಈಶ್ವರಪ್ಪ)
ಇಂಧನ ಸಚಿವರು.

ಕರ್ನಾಟಕ ವಿಧಾನ ಸಭೆ

311 ಶ್ರೀ ಪ್ರಕಾಶ್ ಹೆಚ್.ಎಸ್[ಹಾಸನ].

ಮಾನ್ಯ ಪ್ರಾಥಮಿಕ ಮತ್ತು ಶಿಕ್ಷಣ ಸಚಿವರು.

ಅ. ರಾಜ್ಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮತ್ತು ಪ್ರೌಢ ಶಾಲೆಗಳ ಕಟ್ಟಡಗಳನ್ನು ನಬಾರ್ಡ್ ಯೋಜನೆಯ ಆರ್.ಐ.ಡಿ.ಎಫ್ 13ರ ಅನುದಾನದಲ್ಲಿ ಪ್ರಾರಂಭ ಮಾಡಲು ಮಂಜೂರಾತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ [ಹಾಗಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು]

ಬಂದಿದೆ.

ಜಿಲ್ಲಾವಾರು ಮಾಹಿತಿಯನ್ನು ಅನುಬಂಧ–1 ರಲ್ಲಿ ಒದಗಿಸಲಾಗಿದೆ.

ಆ. ನಬಾರ್ಡ್ ಯೋಜನೆಯ ಆರ್.ಐ.ಡಿ.ಎಫ್ ಅನುದಾನದಲ್ಲಿ ಪ್ರಾರಂಭ ಮಾಡಲಾಗಿರುವ ಪದವಿ ಪೂರ್ವ ಕಾಲೇಜುಗಳ ಮತ್ತು ಪ್ರೌಢಶಾಲೆಗಳ ಕಟ್ಟಡಗಳೆಷ್ಟು; ಪೂರ್ಣಗೊಂಡಿರುವ ಕಟ್ಟಡಗಳೆಷ್ಟು; ಪ್ರಾರಂಭಿಸದಿರುವ ಕಟ್ಟಡಗಳೆಷ್ಟು; ಪ್ರಾರಂಭಿಸದಿರಲು ಕಾರಣಗಳೇನು? [ಜಿಲ್ಲಾವಾರು ಮಾಹಿತಿ ನೀಡುವುದು]

ನಬಾರ್ಡ್ ಯೋಜನೆಯ ಆರ್.ಐ.ಡಿ.ಎಫ್ ಅನುದಾನದಲ್ಲಿ ಪ್ರಾರಂಭಮಾಡಲಾಗಿರುವ ಪದವಿ ಪೂರ್ವ ಕಾಲೇಜುಗಳ ಮತ್ತು ಪ್ರೌಢಶಾಲೆಗಳ